# ಕೋವಿಡ್: ಸಕ್ರಿಯ ಪ್ರಕರಣ ಮತ್ತಷ್ಟು ಏರಿಕೆ

ಪ್ರಜಾವಾಣಿ ವಾರ್ತೆ 22-3-21

ಬೆಂಗಳೂರು: ರಾಜ್ಯದಲ್ಲಿ ಸತತ ಆರನೇ ದಿನ ಕೂಡ ಹೊಸ ಪ್ರಕರಣಗಳ ಸಂಖ್ಯೆ ಸಾವಿರದ ಗಡಿ ದಾಟಿದ್ದು, 1,715 ಮಂದಿ ಸೋಂಕಿತರಾಗಿರುವುದು ದೃಢಪಟ್ಟಿದೆ. ಇದರಿಂದಾಗಿ ಸಕ್ರಿಯ ಪ್ರಕರಣಗಳ ಸಂಖ್ಯೆ 13,493ಕ್ಕೆ ಏರಿಕೆಯಾಗಿದೆ.

ಕಳೆದ ತಿಂಗಳು ಈ ವೇಳೆಗೆ ಸಕ್ರಿಯ ಪ್ರಕರಣಗಳ ಸಂಖ್ಯೆ 6,036ಕ್ಕೆ ಇಳಿಕೆಯಾಗಿತ್ತು. ಕೋವಿಡ್ ಪ್ರಕರಣಗಳ ಸಂಖ್ಯೆ ಏರುಗತಿ ಪಡೆದುಕೊಂಡಿರುವ ಪರಿಣಾಮ ಸಕ್ರಿಯ ಪ್ರಕರಣಗಳ ಸಂಖ್ಯೆ ದುಪ್ಪಟ್ಟಾಗಿದೆ. ಆರು ದಿನಗಳಲ್ಲಿ 9,000 ಮಂದಿ ಸೋಂಕಿತರಾಗಿರುವುದು ಖಚಿತಪಟ್ಟಿದೆ. ಈ ತಿಂಗಳು 21 ದಿನಗಳಲ್ಲಿ 19,077 ಮಂದಿ ಕೊರೊನಾ ಸೋಂಕಿತರಾಗಿದ್ದಾರೆ. ಸೋಂಕಿತರಲ್ಲಿ ಸದ್ಯ 137 ಮಂದಿ ತೀವ್ರ ನಿಗಾ ಘಟಕದಲ್ಲಿ ಇದ್ದಾರೆ. ಈವರೆಗೆ ಸೋಂಕಿತರಾದವರ ಸಂಖ್ಯೆ 9.70 ಲಕ್ಷ ದಾಟಿದೆ.

ಕೋವಿಡ್ ಪೀಡಿತರಲ್ಲಿ ಬೆಂಗಳೂರಿನಲ್ಲಿ ಹಾಗೂ ಬೀದರ್‌ನಲ್ಲಿ ತಲಾ ಒಬ್ಬರು ಮೃತಪಟ್ಟಿದ್ದಾರೆ. ಈವರೆಗೆ ಸಾವಿಗೀಡಾದವರ ಸಂಖ್ಯೆ 12,434ಕ್ಕೆ ತಲುಪಿದೆ. ಸೋಂಕಿತರಲ್ಲಿ ಮತ್ತೆ 1,048 ಮಂದಿ ಚೇತರಿಸಿಕೊಂಡಿದ್ದಾರೆ. ಗುಣಮುಖರಾದವರ ಒಟ್ಟು ಸಂಖ್ಯೆ 9.44 ಲಕ್ಷ ದಾಟಿದೆ. ಕೋವಿಡ್ ಪರೀಕ್ಷೆಗಳ ಸಂಖ್ಯೆ ಏರಿಕೆ ಕಂಡಿದ್ದು, ಒಂದು ದಿನದ ಅವಧಿಯಲ್ಲಿ 1.01 ಲಕ್ಷ ಮಂದಿಗೆ ಪರೀಕ್ಷೆ ಮಾಡಲಾಗಿದೆ. ಈವರೆಗೆ ನಡೆಸಲಾದ ಪರೀಕ್ಷೆಗಳ ಸಂಖ್ಯೆ 2.03 ಕೋಟಿ ಗಡಿ ದಾಟಿದೆ.




29 ಜಿಲ್ಲೆಗಳಲ್ಲಿ ಪ್ರಕರಣ: ಕೊಪ್ಪಳ ಹೊರತುಪಡಿಸಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಹೊಸದಾಗಿ ಪ್ರಕರಣಗಳು ವರದಿಯಾಗಿವೆ. ಬೆಂಗಳೂರಿನಲ್ಲಿ ಸೋಂಕಿತರ ಸಂಖ್ಯೆ ಏರುಗತಿ ಪಡೆದುಕೊಂಡಿದೆ. ಹೊಸದಾಗಿ 1,039 ಪ್ರಕರಣಗಳು ವರದಿಯಾಗಿವೆ. ಮೂರು ದಿನಗಳ ಅವಧಿಯಲ್ಲಿ 3,262 ಮಂದಿ ಸೋಂಕಿತರಾಗಿದ್ದಾರೆ. ಈವರೆಗೆ ಕೋವಿಡ್ ಪೀಡಿತರಾದವರ ಸಂಖ್ಯೆ 4.17 ಲಕ್ಷ ದಾಟಿದೆ.

ಉಡುಪಿಯಲ್ಲಿ ಕೂಡ ಸೋಂಕಿತರ ಸಂಖ್ಯೆ ಏರುಗತಿ ಪಡೆದುಕೊಂಡಿದ್ದು, ಹೊಸದಾಗಿ 170 ಪ್ರಕರಣಗಳು ದೃಢಪಟ್ಟಿವೆ. ಮೈಸೂರಿನಲ್ಲಿ ಮತ್ತೆ 70 ಪ್ರಕರಣಗಳು ದೃಢಪಟ್ಟಿವೆ. ಅಲ್ಲಿ ಕೋವಿಡ್ ಪೀಡಿತರಾದವರ ಒಟ್ಟು ಸಂಖ್ಯೆ 54,811ಕ್ಕೆ ತಲುಪಿದೆ. ಬೀದರ್‌ನಲ್ಲಿ 61, ದಕ್ಷಿಣ ಕನ್ನಡದಲ್ಲಿ 54, ಕಲಬುರ್ಗಿಯಲ್ಲಿ 41, ಹಾಸನದಲ್ಲಿ 40 ಪ್ರಕರಣಗಳು ಹೊಸದಾಗಿ ವರದಿಯಾಗಿವೆ.

ರಾಜ್ಯದಲ್ಲಿ ಭಾನುವಾರ 781 ಕೇಂದ್ರಗಳಲ್ಲಿ ಕೋವಿಡ್ ಲಸಿಕೆ ವಿತರಣೆ ಅಭಿಯಾನ ನಡೆದಿದ್ದು, 11,948 ಮಂದಿಗೆ ಲಸಿಕೆ ವಿತರಣೆ ಮಾಡಲಾಗಿದೆ. ಲಸಿಕೆ ಪಡೆದವರಲ್ಲಿ 7,933 ಮಂದಿ ಹಿರಿಯ ನಾಗರಿಕರಾಗಿದ್ದಾರೆ. ಈವರೆಗೆ 24.67 ಲಕ್ಷ ಡೋಸ್ ಲಸಿಕೆಯನ್ನು ಫಲಾನುಭವಿಗಳಿಗೆ ನೀಡಲಾಗಿದೆ. 5.21 ಲಕ್ಷ ಆರೋಗ್ಯ ಕಾರ್ಯಕರ್ತರು ಮೊದಲ ಡೋಸ್ ಲಸಿಕೆ ಪಡೆದುಕೊಂಡಿದ್ದಾರೆ. ಇವರಲ್ಲಿ 3.17 ಲಕ್ಷ ಮಂದಿ ಎರಡನೇ ಡೋಸ್ ಪೂರ್ಣಗೊಳಿಸಿದ್ದಾರೆ. ಲಸಿಕೆ ಪಡೆದುಕೊಂಡ ಹಿರಿಯ ನಾಗರಿಕರ ಸಂಖ್ಯೆ 10.90 ಲಕ್ಷ ತಲುಪಿದೆ.